# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 911 |
| ವಿಧಾನ ಪರಿಷತ್ತು ಸದಸ್ಯರ ಹೆಸರು | : | ಡಾ|| ಯತೀಂದ್ರ ಎಸ್ (ವಿಧಾನಸಭಾ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 15.12.2025 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದ ದುರ್ಬಲ ವರ್ಗಗಳಾದ ಹಿರಿಯ ನಾಗರಿಕರು, ವಿಧವೆ, ಏಕ ಪೋಷಕ, ತೃತೀಯ ಲಿಂಗಿಗಳು ಮುಂತಾದವರಿಗೆ ನಿಯಮಿತವಾಗಿ ಪಡಿತರ ಚೀಟಿ ವಿತರಿಸುವಲ್ಲಿ ಸರ್ಕಾರದ ನೀತಿ ಏನು; (ವಿವರ ಒದಗಿಸುವುದು) | ಕೇಂದ್ರ ಸರ್ಕಾರದ ದಿನಾಂಕ: 25.12.2000 ರ ಪತ್ರದಲ್ಲಿ ಅಂತ್ಯೋದಯ ಅನ್ನ ಪಡಿತರ ಚೀಟಿಗಳನ್ನು ನೀಡಲು ನಿಗಧಿಪಡಿಸಿರುವ ಮಾರ್ಗಸೂಚಿಗಳು ಈ ಕೆಳಕಂಡಂತೆ ಇರುತ್ತದೆ:<br>1. ವಿಧವೆಯರು ಅಥವಾ ಮಾರಕ ಕಾಯಿಲೆಯಿಂದ ಬಳಲುತ್ತಿರುವ ವ್ಯಕ್ತಿಗಳು ಅಥವಾ ಅಂಗವಿಕಲರು ಅಥವಾ 60 ವರ್ಷ ಅಥವಾ ಅದಕ್ಕಿಂತ ಹೆಚ್ಚಿನ ವಯಸ್ಸಿನವರು ಜೀವನಾಧಾರ ಅಥವಾ ಸಾಮಾಜಿಕ ಬೆಂಬಲವಿಲ್ಲದೆ ಇರುವವರು.<br>2. ವಿಧವೆಯರು ಅಥವಾ ಮಾರಕ ಕಾಯಿಲೆಯಿಂದ ಬಳಲುತ್ತಿರುವ ವ್ಯಕ್ತಿಗಳು ಅಥವಾ ಅಂಗವಿಕಲರು ಅಥವಾ 60 ವರ್ಷ ಅಥವಾ ಅದಕ್ಕಿಂತ ಹೆಚ್ಚಿನ ವಯಸ್ಸಿನವರು ಅಥವಾ ಕುಟುಂಬ ಅಥವಾ ಸಾಮಾಜಿಕ ಬೆಂಬಲ ಅಥವಾ ಜೀವನಾಧಾರವಿಲ್ಲದೆ ಇರುವ ಒಂಟಿ ಮಹಿಳೆಯರು ಅಥವಾ ಒಂಟಿ ಪುರುಷರು.<br>3. ಎಲ್ಲಾ ಪ್ರಾಚೀನ ಬುಡಕಟ್ಟು ಕುಟುಂಬಗಳು. (ವಿಸ್ತರಿತ AAY ಅಡಿಯಲ್ಲಿ ಬುಡಕಟ್ಟು ಫಲಾನುಭವಿಗಳು ರಾಜ್ಯ/ಕೇಂದ್ರಾಡಳಿತ ಪ್ರದೇಶದಲ್ಲಿರುವ ಬುಡಕಟ್ಟು ಜನಸಂಖ್ಯೆಗೆ ಅನುಗುಣವಾಗಿರಬೇಕು) |

ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆ 2013 ರನ್ವಯ ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ 4,01,93,130 ಆದ್ಯತಾ ಫಲಾನುಭವಿಗಳ ಮಿತಿಯನ್ನು ನಿಗಧಿಪಡಿಸಿರುತ್ತದೆ.

ರಾಜ್ಯದಲ್ಲಿ ಆದ್ಯತಾ ಪಡಿತರ ಚೀಟಿಗಳನ್ನು ಪಡೆಯುವ ಬಗ್ಗೆ ಸರ್ಕಾರವು 2017 ರಲ್ಲಿ ಈ ಕೆಳಕಂಡಂತೆ ಹೊರಗಿಡುವ ಮಾನದಂಡಗಳನ್ನು ರೂಪಿಸಿದೆ.

1. ವೇತನವನ್ನು ಗಣನೆಗೆ ತೆಗೆದುಕೊಳ್ಳದೆ ಎಲ್ಲಾ ಖಾಯಂ ನೌಕರರು ಅಂದರೆ ಸರ್ಕಾರದ ಅಥವಾ ಸರ್ಕಾರದಿಂದ ಅನುದಾನವನ್ನು ಪಡೆಯುತ್ತಿರುವ ಸಂಸ್ಥೆಗಳು ಅಥವಾ ಸರ್ಕಾರಿ ಪ್ರಾಯೋಜಿತ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು/ ಮಂಡಳಿಗಳು/ ನಿಗಮಗಳು/ ಸ್ವಾಯತ್ತ ಸಂಸ್ಥೆಗಳು ಇತ್ಯಾದಿ ಒಳಗೊಂಡಂತೆ ಆದಾಯ ತೆರಿಗೆ/ಸೇವಾ ತೆರಿಗೆ/ ಜಿಎಸ್‌ಟಿ/ವೃತ್ತಿ ತೆರಿಗೆ ಪಾವತಿಸುವ ಎಲ್ಲಾ ಕುಟುಂಬಗಳು.
2. ಗ್ರಾಮೀಣ ಪ್ರದೇಶಗಳಲ್ಲಿ 03 ಹೆಕ್ಟರ್ ಒಣಭೂಮಿ ಅಥವಾ ತತ್ಸಮಾನ ನೀರಾವರಿ ಭೂಮಿ ಹೊಂದಿರುವ ಕುಟುಂಬಗಳು ಅಥವಾ ಗ್ರಾಮೀಣ ಪ್ರದೇಶವನ್ನು ಹೊರತುಪಡಿಸಿ ನಗರ ಪ್ರದೇಶಗಳಲ್ಲಿ 1000 ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾ ಮನೆಯನ್ನು ಸ್ವಂತವಾಗಿ ಹೊಂದಿರುವ ಕುಟುಂಬಗಳು.
3. ಜೀವನೋಪಾಯಕ್ಕಾಗಿ ಸ್ವತಃ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರಾಕ್ಟರ್, ಮ್ಯಾಕ್ಸಿಕ್ಯಾಬ್, ಟ್ಯಾಕ್ಸಿ ಇತ್ಯಾದಿಗಳನ್ನು ಹೊಂದಿದ ಕುಟುಂಬವನ್ನು ಹೊರತುಪಡಿಸಿ ನಾಲ್ಕು ಚಕ್ರದ ವಾಹನಗಳನ್ನು ಹೊಂದಿರುವ ಎಲ್ಲಾ ಕುಟುಂಬಗಳು.

| | | |
|---|---|---|
| | | 4. ಕುಟುಂಬದ ವಾರ್ಷಿಕ ಆದಾಯವು ರೂ. 1.20 ಲಕ್ಷಗಳಿಗಿಂತಲೂ ಹೆಚ್ಚು ಇರುವ ಕುಟುಂಬಗಳು.<br><br>ಮೇಲಿನ ಹೊರಗಿಡುವ ಮಾನದಂಡಗಳನ್ವಯ ಹೊರತುಪಡಿಸಿ ಆದ್ಯತಾ ಪಡಿತರ ಚೀಟಿಗಳನ್ನು ಅರ್ಹ ಫಲಾನುಭವಿಗಳಿಗೆ ವಿತರಿಸಲು ಕ್ರಮವಹಿಸಲಾಗಿದೆ. |
| ಆ | ಗ್ರಾಮೀಣ ಭಾಗಗಳಲ್ಲಿ ದುರ್ಬಲ ವರ್ಗಗಳಿಗೆ ಪಡಿತರ ಚೀಟಿ ನೀಡುವಲ್ಲಿ ಮತ್ತು ನಿಗಧಿತವಾಗಿ ಪಡಿತರ ದೊರೆಯುವಲ್ಲಿ ವಿಳಂಬವಾಗುತ್ತಿರುವುದು ಸರ್ಕಾರ ದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ವಿಳಂಬತೆಯನ್ನು ತಡೆಯುವಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ಒದಗಿಸುವುದು) | ಸರ್ಕಾರದ ಆದೇಶ ಸಂಖ್ಯೆ: ಇ-ಆನಾಸ 159 ಡಿಆರ್‌ಎ 2025 ದಿನಾಂಕ: 30.10.2025 ರಲ್ಲಿ ರಾಜ್ಯದಲ್ಲಿರುವ ಅನರ್ಹ ಆದ್ಯತಾ ಪಡಿತರ ಚೀಟಿಗಳನ್ನು ಪತ್ತೆ ಹಚ್ಚಿ ಸದರಿ ಅನರ್ಹ ಆದ್ಯತಾ ಪಡಿತರ ಚೀಟಿಗಳನ್ನು ಆದ್ಯತೇತರ ಪಡಿತರ ಚೀಟಿಗಳನ್ನಾಗಿ (NPHH) ಪರಿವರ್ತಿಸಲು ಹಾಗೂ ಈ ರೀತಿ ಪರಿವರ್ತಿಸಿದ ಪ್ರಮಾಣಕ್ಕೆ ಅನುಗುಣವಾಗಿ ಅಷ್ಟೇ ಪ್ರಮಾಣದ ಆದ್ಯತಾ ಪಡಿತರ ಚೀಟಿಗಳನ್ನು (PHH) ಬಡತನ ರೇಖೆಗಿಂದ ಕೆಳಗಿರುವ ಅರ್ಹ ನಾಗರಿಕರಿಗೆ ವಿತರಿಸಲು ಈ ಕೆಳಕಂಡಂತೆ ಕ್ರಮ ವಹಿಸಲು ಆದೇಶಿಸಿದೆ.<br><br>1 ಆದ್ಯತಾ ಪಡಿತರ ಚೀಟಿಗಳನ್ನು (PHH) ಹೊಂದಿರುವ ಅನರ್ಹ ಫಲಾನುಭವಿಗಳನ್ನು ಪತ್ತೆ ಹಚ್ಚಿ ಸದರಿಯವರು ಹೊಂದಿರುವ ಆದ್ಯತಾ ಪಡಿತರ ಚೀಟಿಗಳನ್ನು ಆದ್ಯತೇತರ ಪಡಿತರ ಚೀಟಿಗಳನ್ನಾಗಿ (NPHH) ಪರಿವರ್ತಿಸತಕ್ಕದ್ದು.<br>2. ಈ ರೀತಿ ತಾತ್ಕಾಲಿಕವಾಗಿ ಆದ್ಯತೀತರ ಪಡಿತರ ಚೀಟಿಯನ್ನಾಗಿ (NPHH)ಪರಿವರ್ತಿಸಲಾದ ಪಡಿತರದಾರರು ಆದ್ಯತಾ ಪಡಿತರ ಚೀಟಿ ಹೊಂದಲು (PHH) ಅರ್ಹರಾಗಿದ್ದಲ್ಲಿ 45 ದಿನಗಳೊಳಗಾಗಿ ಅಗತ್ಯ ದಾಖಲೆಗಳೊಂದಿಗೆ ಸಂಬಂಧಪಟ್ಟ ತಾಲ್ಲೂಕಿನ ತಹಶೀಲ್ದಾರರಿಗೆ ಮನವಿ ಸಲ್ಲಿಸಿದಲ್ಲಿ ಸದರಿ ಮನವಿಯನ್ನು ಪರಿಶೀಲಿಸಿ ಆದ್ಯತಾ ಪಡಿತರ ಚೀಟಿ ಹೊಂದಲು ನಿಯಮಾನುಸಾರ ಅರ್ಹರಿದ್ದಲ್ಲಿ ಅಂತಹವರ ಆದ್ಯತಾ ಪಡಿತರ ಚೀಟಿಯನ್ನು (PHH) ಮರುಸ್ಥಾಪಿಸತಕ್ಕದ್ದು |

| | | |
|---|---|---|
| | | 3. ಅನರ್ಹರು ಹೊಂದಿರುವ ಆದ್ಯತಾ ಪಡಿತರ ಚೀಟಿಗಳನ್ನು (PHH) ಆದ್ಯತೇತರ ಪಡಿತರ ಚೀಟಿಗಳನ್ನಾಗಿ (NPHH) ಪರಿವರ್ತಿಸಿದ ನಂತರ ಯಾವುದೇ ಆಕ್ಷೇಪಣೆ ಸ್ವೀಕೃತವಾಗಿ ಇದ್ದಲ್ಲಿ ಅಂತಹ ಪಡಿತರ ಚೀಟಿಗಳನ್ನು ಆದ್ಯತೇತರ ಪಡಿತರ (NPHH) ಮುಂದುವರೆಸತಕ್ಕದ್ದು.<br>4. ಆದ್ಯತಾ ಪಡಿತರ ಚೀಟಿಗಳನ್ನು ಹೊಂದಿರುವ ಅನರ್ಹರನ್ನು ಪತ್ತೆ ಹಚ್ಚಿ ಆದ್ಯತೇತರ ಪಡಿತರ ಚೀಟಿಗಳನ್ನಾಗಿ (NPHH) ಮಾರ್ಪಡಿಸಿದ ನಂತರ ಅಷ್ಟೇ ಸಂಖ್ಯೆಯ ಆದ್ಯತಾ ಪಡಿತರ ಚೀಟಿಗಳನ್ನು (PHH) ಹೊಸದಾಗಿ ಅರ್ಹ ಫಲಾನುಭವಿಗಳಿಗೆ ನೀಡಲು ಕ್ರಮವಹಿಸತಕ್ಕದ್ದು.<br>5.ಅದರಂತೆ ಕೇಂದ್ರ ಮತ್ತು ರಾಜ್ಯ ಸರ್ಕಾರದ ಮಾನದಂಡಗಳಂತೆ ಅನರ್ಹ ಪಡಿತರ ಚೀಟಿಗಳನ್ನು ಪತ್ತೆ ಹಚ್ಚಿ, ಆದ್ಯತೇತರ ಪಡಿತರ ಚೀಟಿಗಳನ್ನಾಗಿ ಪರಿವರ್ತಿಸಿ ಹಾಗೂ ಈ ರೀತಿ ಪರಿವರ್ತಿಸಿದ ಪ್ರಮಾಣಕೆ, ಅನುಗುಣವಾಗಿ ಅಷ್ಟೇ ಪ್ರಮಾಣದ ಆದ್ಯತಾ ಪಡಿತರ ಚೀಟಿಗಳನ್ನು (PHH) ಬಡತನ ರೇಖೆಗಿಂದ ಕೆಳಗಿರುವ ಅರ್ಹ ನಾಗರಿಕರಿಗೆ ವಿತರಿಸಲು ಕ್ರಮವಹಿಸಲಾಗಿದೆ. |

ಇ-ಆನಾಸ 330 ಡಿಆರ್ಎ 2025

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ
ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ
ಇಲಾಖಾ ಸಚಿವರು